ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ರಾಜ್ಯದಲ್ಲಿ ಚಿರತೆ ದಾಳಿ ಪ್ರಕರಣಗಳ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)

441 (425) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಎಷ್ಟು ಚಿರತೆ ಮತ್ತು ಹುಲಿ ಪ್ರತ್ಯೇಕ್ಷವಾದ ಪ್ರಕರಣಗಳು ದಾಖಲಾಗಿವೆ ; (ವಿವರ ನೀಡುವುದು)

(ಆ) ಚಿರತೆ ಮತ್ತು ಹುಲಿಗಳು ಮಾನವನ ಮೇಲೆ ದಾಳಿ ಮಾಡಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಇತ್ತೀಚಿನ ದಿನಗಳಲ್ಲಿ ಈ ರೀತಿ ವನ್ಯಜೀವಿಗಳು ಮಾನವನ ಮೇಲೆ ದಾಳಿ ಮಾಡಲು ಮತ್ತು ಮಾನವನ ವಾಸಸ್ಥಳಗಳಲ್ಲಿ ಕಾಣಿಸಿಕೊಳ್ಳಲು ಕಾರಣಗಳೇನು ;

(ಈ) ಈ ರೀತಿಯ ಪ್ರಕರಣಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ವನ್ಯ ಜೀವಿಗಳ ದಾಳಿಯಿಂದ ಮೃತಪಟ್ಟವರಿಗೆ ಸರ್ಕಾರ ನೀಡುವ ಪರಿಹಾರ ಎಷ್ಟು ; ಇಲ್ಲಿಯವರೆಗೆ ಎಷ್ಟು ಪ್ರಕರಣಗಳಲ್ಲಿ ಪರಿಹಾರ ನೀಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)